ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂ: ಕಾಶಿಇ:ಶೈವಿ:04:ಸುತ್ತೋಲೆ:2019-20 ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ, ಬೆಂಗಳೂರು

ದಿನಾಂಕ: 22-03-2020

# ಸುತ್ತೋಲೆ

ವಿಷಯ: ನೋವಲ್ ಕೊರೋನಾ ವೈರಸ್ ಸೋಂಕು ತಡೆಗಟ್ಟಲು ಮುಂಜಾಗ್ರತಾ ಕ್ರಮವಾಗಿ ಕಾಲೇಜು ಶಿಕ್ಷಣ ಇಲಾಖಾವ್ಯಾಪ್ತಿಯ ಸರ್ಕಾರಿ ಮತ್ತು ಖಾಸಗಿ ಅನುದಾನಿತ ಕಾಲೇಜುಗಳ ಭೋದಕರು ಮತ್ತು ಬೋಧಕೇತರ ಸಿಬ್ಬಂದಿವರ್ಗದವರಿಗೆ ರಜೆ ಘೋಷಿಸುವ ಬಗ್ಗೆ.

ಉಲ್ಲೇಖ 1) ಈ ಕಚೇರಿ ಸಮಸಂಖ್ಯೆಯ ಸುತ್ತೋಲೆ ದಿ:13-03-2020

2) D.O. letter No. Secry(HE)/MHRD/2020. Dt. 21-03-2020 of Secretary, Department of higher Education / School Education & Literacy MHRD, New Delhi

>>>><<<<

ನೋವೆಲ್ ಕೊರೋನಾ ವೈರಸ್ ಸೋಂಕು ತಡೆಗಟ್ಟುವಿಕೆ ಮುಂಜಾಗ್ರತ ಕ್ರಮವಾಗಿ ಈ ಕಚೇರಿ ಸಮಸಂಖ್ಯೆಯ ದಿನಾಂಕ:13-03-2020ರ ಸುತ್ತೋಲೆಯಲ್ಲಿ ಇಲಾಖಾವ್ಯಾಪ್ತಿಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿಧ್ಯಾರ್ಥಿಗಳಿಗೆ ದಿನಾಂಕ:14-03-2020 ರಿಂದ 28-03-2020 ರವರೆಗೆ 15 ದಿನಗಳ ರಜೆಯನ್ನು ಘೋಷಿಸಲಾಗಿರುತ್ತದೆ.

ಮುಂದುವರೆದು ಕಾರ್ಯದಶಿಗಳು, ಉನ್ನತ ಶಿಕ್ಷಣ ಹಾಗೂ ಸಾಕ್ಷರತೆ, ಮಾನವ ಸಂಪನ್ಮೂಲ ಅಭಿವೃದ್ಧಿ ಇಲಾಖೆ, ಭಾರತ ಸರ್ಕಾರ ನವದೆಹಲಿ ಇವರ ಉಲ್ಲೇಖ(02)ರ ಸೂಚನೆಗಳನ್ವಯ ಕೆಳಕಂಡಂತೆ ಕ್ರಮವಹಿಸಲು ಸೂಚಿಸಲಾಗಿದೆ.

1) ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗದವರು ದಿನಾಂಕ:31-03-2020ರವರೆಗೆ ಮನೆಯಿಂದಲೇ ಕಾಲೇಜಿನ ಕಾರ್ಯಗಳನ್ನು ನಿರ್ವಹಿಸಲು ಅನುಮತಿ ನೀಡುವುದು.

2) ಬೋಧಕ ಸಿಬ್ಬಂದಿವರ್ಗದವರು ಈ ಅವಧಿಯಲ್ಲಿ ಕೆಳಕಂಡಂತೆ ಶೈಕ್ಷಣಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವುದು.

- ಆನ್‌ಲೈನ್ ಮೂಲಕ ಬೋಧನೆ ಮತ್ತು ಆನ್‌ಲೈನ್ ಮೂಲಕ ಮೌಲ್ಯಮಾಪನ ಮಾಡಲು ಅಗತ್ಯವಿರುವ ಪಠ್ಯವಸ್ತು ಅಭಿವೃದ್ಧಿ ಪಡಿಸುವುದು.
- ಮುಂದಿನ ಶೈಕ್ಷಣಿಕ ವರ್ಷಕ್ಕೆ ಅಗತ್ಯವಿರುವ ಪಠ್ಯಯೋಜನೆ/ ಟಿಪ್ಪಣಿಯನ್ನು ಸಿದ್ಧಪಡಿಸಸುವುದು. ಹಾಗೂ ತಾವು ಬೋದಿಸುವ ವಿಷಯದ ಪಠ್ಯವಸ್ತುವನ್ನು ಅಭಿವೃದ್ಧಿಪಡಿಸುವುದು.

- ಲೇಖನಗಳನ್ನು ಬರೆಯುವುದು.
- ಕೊಶ್ಚನ್ ಬ್ಯಾಂಕ್‌ಗಾಗಿ ವಿನೂತನ ಪ್ರಶ್ನೆಗಳನ್ನು ಸಿದ್ಧಪಡಿಸುವುದು. ಏಕ್ ಭಾರತ್ ಶ್ರೇಷ್ಠ್ ಭಾರತ್ ಕಾರ್ಯಕ್ರಮಕ್ಕೆ ವಿನೂತನ ಯೋಜನೆ ಸಿದ್ಧಪಡಿಸುವುದು.

3) ದಿನಾಂಕ:31-03-2020ರವರೆಗೆ ಬೋಧಕ/ಬೋಧಕೇತರ ಸಿಬ್ಬಂದಿವರ್ಗದವರು ಹಾಗೂ ಅತಿಥಿ ಉಪನ್ಯಾಸಕರು ಸೇರಿದಂತೆ ಎಲ್ಲಾ ಸಿಬ್ಬಂದಿವರ್ಗದವರ ರಜಾ ಅವಧಿಯನ್ನು ಕರ್ತವ್ಯ ಎಮದು ಪರಿಗಣಿಸುವುದು.

4) ಹಾಸ್ಟೆಲ್‌ಗಳಲ್ಲಿ/ವಸತಿಯುಕ್ತ ಕಾಲೇಜುಗಳಲ್ಲಿ ಉಳಿದುಕೊಂಡಿರುವ ವಿದೇಶಿ ವಿಧ್ಯಾರ್ಥಿಗಳು ಹಾಸ್ಟೆಲ್‌ಗಳಲ್ಲಿ/ವಸತಿಯುಕ್ತ ಕಾಲೇಜುಗಳಲ್ಲಿಯೇ ಉಳಿದುಕೊಳ್ಳಲು ಅಗತ್ಯ ಸೌಲಭ್ಯ ಒದಗಿಸುವುದು ಹಾಗೂ ಅವರ ಸುರಕ್ಷತೆಗಾಗಿ ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವುದು.

5) ಬೋಧಕ/ಬೋಧಕೇತರ ಸಿಬ್ಬಂದಿವರ್ಗದವರು ಹಾಗೂ ಅತಿಥಿ ಉಪನ್ಯಾಸಕರು ಸೇರಿದಂತೆ ಎಲ್ಲಾ ಸಿಬ್ಬಂದಿವರ್ಗದವರನ್ನು ತುರ್ತು ಪರಿಸ್ಥಿತಿಯಲ್ಲಿ ಸಂಪರ್ಕಿಸಲು ಅನುಕೂಲವಾಗುವಂತೆ ಅವರ ದೂರವಾಣಿ ಸಂಖ್ಯೆಗಳನ್ನು ಮತ್ತು ಇ-ಮೇಲ್ ವಿಳಾಸಗಳನ್ನು ಪ್ರಾಂಸುಪಾಲರು ಪಡೆದುಕೊಳ್ಳುವುದು.

6) ಈ ರಜಾ ಅವಧಿಯಲ್ಲಿ ಬೋಧಕ/ಬೋಧಕೇತರ ಸಿಬ್ಬಂದಿವರ್ಗದವರು ಯಾವುದೇ ಕಾರಣಕ್ಕೂ ಕೇಂದ್ರಸ್ಥಾನವನ್ನು ಬಿಡತಕ್ಕದ್ದಲ್ಲ. ಸರ್ಕಾರಕ್ಕೆ ಬೋಧಕ/ಬೋಧಕೇತರ ಸಿಬ್ಬಂದಿವರ್ಗದವರ ಸೇವೆ ಅಗತ್ಯವಿದ್ದಾಗ ಕಡ್ಡಾಯವಾಗಿ ಸೇವೆಗೆ ಹಾಜರಾಗತಕ್ಕದ್ದು.

**7) 7ನೇ ಯು.ಜಿ.ಸಿ. ಪರಿಷ್ಕೃತ ವೇತನಶ್ರೇಣಿಯ ಹಿಂಬಾಕಿ ಮೊತ್ತವನ್ನು ಸೆಳೆಯಬೇಕಿರುವ ಪ್ರಯುಕ್ತ ಕಾಲೇಜಿನ ಕಚೇರಿಗಳಲ್ಲಿ ಈ ಕಾರ್ಯವನ್ನು ನಿರ್ವಹಿಸಲು ಅಗತ್ಯವಿರುವ ಬೋಧಕ/ಬೋಧಕೇತರ ಸಿಬ್ಬಂದಿವರ್ಗದವರು ಮಾತ್ರ ಹಾಜರಿರಲು ಅಥವಾ ಮನೆಯಂದಲೇ ನಿರ್ವಹಿಸಲು ಪ್ರಾಂಶುಪಾಲರು ಅಗತ್ಯ ಕ್ರಮ ಕೈಗೊಳ್ಳುವುದು.**

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ

ಇಲಾಖಾವ್ಯಾಪ್ತಿಯ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಕಾಲೇಜುಗಳ ಪ್ರಾಂಶುಪಾಲರಿಗೆ – ಮಾಹಿತಿ ಹಾಗೂ ಅಗತ್ಯಕ್ರಮಕ್ಕಾಗಿ.

ಪ್ರತಿಯನ್ನು

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮಾಹಿತಿಗಾಗಿ.
2. ಇಲಾಖಾವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ – ಮಾಹಿತಿ ಮತ್ತು ಅಗತ್ಯಕ್ರಮಕ್ಕಾಗಿ.
3. ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರಕಚೇರಿ, ಬೆಂಗಳೂರು – ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4. ಕಚೇರಿ ಪ್ರತಿ.